ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE: 26/3/21

# ‘ರಾಜಕೀಯ ವೇದಿಕೆಯ ಮನಸ್ಥಿತಿಯಿಂದ ಹೊರಬನ್ನಿ’

## ವಿರೋಧ ಪಕ್ಷಕ್ಕೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸಲಹೆ

ಪ್ರಜಾವಾಣಿ ವಾರ್ತೆ 26-3-21

ಬೆಂಗಳೂರು: ವಿಧಾನಸಭೆಯಲ್ಲಿ ವಿರೋಧ ಪಕ್ಷ ಕಾಂಗ್ರೆಸ್ಸಿನ ನಡೆಗೆ ತೀವ್ರ ಬೇಸರ ವ್ಯಕ್ತಪಡಿಸಿದ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ‘ಸದನವನ್ನು ರಾಜಕೀಯ ವೇದಿಕೆಯಾಗಿ ಮಾಡುವ ಮನಸ್ಥಿತಿಯಿಂದ ಹೊರಬರಬೇಕು’ ಎಂದು ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ‘ಸದನದ ಹೊರಗಡೆ ರಾಜಕೀಯ ಚಟುವಟಿಕೆ ತಮ್ಮ ಇಚ್ಛೆಗೆ ತಕ್ಕಂತೆ ನಡೆಸಿ. ಆದರೆ, ಸದನದ ಒಳಗಿನ ಸಂವಾದ, ತರ್ಕಕ್ಕೆ ಇರುವಂಥ ಅವಕಾಶವನ್ನು ಮೊಟಕುಗೊಳಿಸಿರುವುದು ಸರಿಯಲ್ಲ. ಹಾಗೆ ಆಗದಂತೆ ನೋಡಿಕೊಳ್ಳುವ ಜವಾಬ್ದಾರಿ ವಿರೋಧ ಪಕ್ಷದ ಮೇಲಿದೆ’ ಎಂದರು.

‘ಆಡಳಿತ ಪಕ್ಷದ ಸಭಾನಾಯಕರಿಗೆ ಇರುವಷ್ಟೇ ಜವಾಬ್ದಾರಿ ವಿರೋಧ ಪಕ್ಷದ ನಾಯಕರಿಗೆ ಇದೆ. ಸಂಸದೀಯ ವ್ಯವಸ್ಥೆಗೆ ಶಕ್ತಿ ಬರಬೇಕಾದರೆ ವಿರೋಧ ಪಕ್ಷ ಕೂಡಾ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು. ‘ಒಂದು ದೇಶ, ಒಂದು ಚುನಾವಣೆ’ ವಿಷಯವನ್ನು ಎರಡು ದಿನ



ಚರ್ಚೆಗೆ ತೆಗೆದುಕೊಳ್ಳಲು ಬಯಸಿದ್ದೆ. ಆದರೆ ಚರ್ಚೆ ಆಗಲೇ ಇಲ್ಲ. ಅವರು (ಕಾಂಗ್ರೆಸ್) ಅಭಿಪ್ರಾಯಗಳನ್ನು ವ್ಯಕ್ತಪಡಿಸಬೇಕಿತ್ತು. ಭಿನ್ನಾಭಿಪ್ರಾಯಗಳು ಇರುವುದು ಸಹಜ. ಅದನ್ನಾದರೂ ವ್ಯಕ್ತಪಡಿಸಬೇಕಿತ್ತು. ಚರ್ಚೆಗೆ ಅಡ್ಡಿಪಡಿಸಿರುವುದು ಅಕ್ಷಮ್ಯ. ಚರ್ಚೆ ಆಗದಂತೆ, ಸದನ ನಡೆಯದಂತೆ ಮಾಡಿರುವುದನ್ನು ಜನರು ಹಾಗೂ ಸಂವಿಧಾನವೂ ಒಪ್ಪುವುದಿಲ್ಲ’ ಎಂದರು.

‘ಸದನದ ಒಳಗೆ ಮಾತಿನಲ್ಲಿ, ಕ್ರಿಯೆಯಲ್ಲಿ ರಾಜಕೀಯ ಇರಲಿ. ಅದು ಸಂಸದೀಯ ಮೌಲ್ಯಗಳಿಗೆ ಪೂರಕವಾಗಿರಲಿ. ಆಡಳಿತ ಪಕ್ಷದ ನ್ಯೂನತೆಗಳನ್ನು ಎತ್ತಿ ತೋರಿಸಲಿ. ಚರ್ಚೆ ಮಾಡದೆ, ಉಳಿದವರಿಗೂ ಅವಕಾಶ ನೀಡುವುದಿಲ್ಲವೆಂದರೆ ಹೇಗೆ’ ಎಂದೂ ಪ್ರಶ್ನಿಸಿದರು.

‘ಕಲಾಪದಲ್ಲಿ ಸಚಿವರು, ಶಾಸಕರ ಪಾಲ್ಗೊಳ್ಳುವಿಕೆ ಗಮನಿಸಿದಾಗ ಅವರು ಇನ್ನೂ ಉತ್ತಮವಾಗಿ ಸ್ಪಂದಿಸಬಹುದಿತ್ತು. ಅಧಿವೇಶನ ನಡೆಯುವ ಅಷ್ಟೂ ದಿನ ಬೇರೆ ಕಾರಣಗಳಿಗೆ ಗೈರಾಗುವುದು, ಭಾಗವಹಿಸಿದರೂ ಸಕ್ರಿಯವಾಗಿ ತೊಡಗಿಸಿಕೊಳ್ಳದಿರುವುದು ಸರಿಯಲ್ಲ. ಸಚಿವರು, ಶಾಸಕರು ಕಾರಣಗಳನ್ನು ಕೊಟ್ಟು ಗೈರಾಗುವುದು ಹೆಚ್ಚಾಗುತ್ತಿದೆ’ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

**ಪರಿಶೀಲಿಸಿ ಕ್ರಮ:** ‘ಸಚಿವ ಡಾ. ಸುಧಾಕರ್ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿ ಕಾಂಗ್ರೆಸ್ ನಾಯಕರು ಪತ್ರ ಬರೆದಿದ್ದಾರೆ. ಸುಧಾಕರ್ ತಮ್ಮ ಹೇಳಿಕೆಗೆ ಸ್ಪಷ್ಟೀಕರಣ ನೀಡಿದ್ದಾರೆ. ಎರಡನ್ನೂ ಪರಿಗಣಿಸಿ ಏನು ಮಾಡಬಹುದು, ಯಾವ ರೀತಿಯ ಕ್ರಮ ಕೈಗೊಳ್ಳುವ ಅವಕಾಶ ಇದೆ ಎಂಬ ಬಗ್ಗೆ ಪರಿಶೀಲಿಸುತ್ತೇನೆ’ ಎಂದರು.